ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯ ಕೆರೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

301 (356) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು; (ಕೆರೆಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಎಷ್ಟು ಕೆರೆಗಳಲ್ಲಿ ಕೆರೆ ಏರಿ ನಿರ್ಮಾಣ, ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಗುತ್ತಿಗೆದಾರರ ವಿವರಗಳೇನು; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಕೋಡಿ ಹೊಡೆದು ಅಥವಾ ಏರಿ ಹೊಡೆದು ಹಾಳಾಗಿರುವ ಕೆರೆಗಳ ಸಂಖ್ಯೆ ಎಷ್ಟು; ಈ ರೀತಿ ಹೊಡೆದು ಹಾಳಾಗಿರುವ ಎಷ್ಟು ಕೆರೆಗಳ ಪುನರ್ ನಿರ್ಮಾಣ ಕಾಮಗಾರಿ ಮಾಡಲಾಗಿದೆ; ಕಾಮಗಾರಿ ವೆಚ್ಚವೆಷ್ಟು? (ಗುತ್ತಿಗೆದಾರರ ವಿವರ ನೀಡುವುದು) (ಕೆರೆವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)